22 ಬ್ಯಾಕ್‌ಲಾಗ್ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಸರ್ಕಾರವು 250 ಪಶುವೈದ್ಯಾಧಿಕಾರಿಗಳ ವಿಶೇಷ ನೇರ ನೇಮಕಾತಿಗೆ ಅನುಮೋದನೆ ನೀಡಿದೆ, ಈ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಪಶುವೈದ್ಯಕೀಯ ಮೇಲ್ವಿಚಾರಕರ ಹಾಗೂ ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಬಡ್ತಿ ನೀಡುವ ಮೂಲಕ ಭರ್ತಿ ಮಾಡಲಾಗುತ್ತಿದೆ, ಆರ್ಥಿಕ ಮಿತವ್ಯಯ ಸಡಿಲಗೊಳಿಸಿದ ನಂತರ ಇತರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಕಟ್ಟಡ ಕಟ್ಟಲು ಲೋಕಸಭಾ/ರಾಜ್ಯಸಭಾ ಸದಸ್ಯರ ಸ್ಥಳೀಯ ಅಭಿವೃದ್ಧಿ ನಿಧಿಯಿಂದ ಅನುದಾನ ಪಡೆಯಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗುತ್ತಿದೆ, ಹಾಗೂ ಕಟ್ಟಡ ಕಾಮಗಾರಿಯನ್ನು ನಬಾರ್ಡ್‌ನ ಸಾಲ ಪಡೆಯುವ ಮೂಲಕ ನಿರ್ಮಾಣ ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಹುದ್ದೆಯ ವಿವರ

	ಮಂಜೂರು	ಭರ್ತಿ	ಖಾಲಿ
ಸಹಾಯಕ ನಿರ್ದೇಶಕರು	1	1	–
ಪಶುವೈದ್ಯಾಧಿಕರಿ	12	4	8
ಪಶುವೈದ್ಯಕೀಯ ಮೇಲ್ವಿಚಾರಕರು	1	–	1
ಹಿರಿಯ ಪಶುವೈದ್ಯಕೀಯ ಪರಿವೀಕ್ಷಕರು	12	10	2
ಪಶುವೈದ್ಯಕೀಯ ಸಹಾಯಕರು	15	3	12
ಡಿ ದರ್ಜೆ ನೌಕರರು	32	31	1

250 ಪಶುವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಮೀಸಲಾತಿ ಅರ್ಹತೆ ಮೇರೆಗೆ ಭರ್ತಿ ಮಾಡಲಾಗುತ್ತಿದ್ದು, ಇದರಲ್ಲಿ ಮುಂಡರಗಿ ಕ್ಷೇತ್ರದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಗದಗ ಜಿಲ್ಲೆ ಮುಳಗುಂದ ಪಟ್ಟಣದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆ

258 (574): ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ (ತಿಕೋಟ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಳಗುಂದ ಪಟ್ಟಣದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ ಕಟ್ಟಡವಿದೆಯೇ?

ಆ) ಕಟ್ಟಡವಿಲ್ಲದಿದ್ದರೆ, ಕಟ್ಟಲು ಏನು ಕ್ರಮ ಕೈಗೊಳ್ಳಲಾಗಿದೆ: ಹಾಗೂ ಕಟ್ಟಡ ಯಾವಾಗ ಒದಗಿಸುತ್ತೀರಾ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಗದಗ ಜಿಲ್ಲೆಯಲ್ಲಿನ ಮುಳಗುಂದದಲ್ಲಿ ಮೊರಾರ್ಜಿ ವಸತಿ ಶಾಲೆಯ ನಿರ್ಮಾಣ ಕಾರ್ಯ ಸ್ಥಗಿತಗೊಂಡಿದ್ದ ಕಾರಣ ಜಿಲ್ಲಾಧಿಕಾರಿ, ಗದಗ ಇವರಿಂದ ಮಂಜೂರುಗೊಂಡ ನಿವೇಶನ ಭಾರಿ ಹಳ್ಳದಿಂದ ಕೂಡಿದ್ದು, ಆ ಹಳ್ಳವನ್ನು ಮುಚ್ಚಿಸಲು ಸಾಕಷ್ಟು ಬಂಡವಾಳವನ್ನು ಹಾಕಿ ಸೂಕ್ತ ನಿರ್ಮಾಣ ಮಾಡಬೇಕಾಗುತ್ತದೆ. ಅಲ್ಲದೇ ಈ ಕಾಮಗಾರಿ ನಿರ್ಮಾಣ ಕಾರ್ಯವನ್ನು ಈಗಾಗಲೇ ರೂ. 185.37 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಎನ್.ಪಿ.ಸಿ.ಸಿ. ಇವರಿಗೆ ನೀಡಲಾಗಿದೆ.